**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ.,ಯವರ ನ್ಯಾಯಾಲಯ**
**ಟಿ.ನರಸೀಪುರ**

**ಸಿಸಿ ನಂಃ 463/2024**

**ಸಿಡಬ್ಲ್ಯೂ-4 ಪಿಡಬ್ಲ್ಯೂ-4**

| | | |
|---|---|---|
| ಸಾಕ್ಷಿದಾರರ ಹೆಸರು | : | ಪರಮೇಶ್ |
| ತಂದೆಯ ಹೆಸರು | : | ಮಹೇಶ್ |
| ವಯಸ್ಸು | : | 24 ವರ್ಷ |
| ಉದ್ಯೋಗ | : | ಆಟೋ ಡ್ರೈವರ್ |
| ವಾಸಸ್ಥಳ | : | ತಲಕಾಡು ಗ್ರಾಮ. |

**ಸಾಕ್ಷಿಗೆ ದಿನಾಂಕಃ 03.07.2026 ರಂದು ಪ್ರಮಾಣ ಮಾಡಿಸಲಾಯಿತು.**
**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ರವರಿಂದಃ**

ಈ ಪ್ರಕರಣದ ಬಗ್ಗೆ ನನಗೆ ಮಾಹಿತಿ ಇರುವುದಿಲ್ಲ. ಆರೋಪಿಯು ನನಗೆ ಗೊತ್ತಿರುವುದಿಲ್ಲ. ಸಾಕ್ಷಿಯು ನಿ.ಪಿ.4 ರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿ.ಪಿ.4(ಬಿ) ಎಂದು ಗುರುತಿಸಲಾಯಿತು. ಸದರಿ ದಾಖಲೆಗೆ ನಾನು ಸಹಿಯನ್ನು ಪೋಲಿಸ್ ಠಾಣೆಯಲ್ಲಿ ಮಾಡಿರುತ್ತೇನೆ. ಸದರಿ ದಾಖಲೆಯಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿರುವುದಿಲ್ಲ. ನಿ.ಪಿ.1 ರಿಂದ 4 ರ ಫೋಟೋಗಳನ್ನು ನೋಡಿ ಗುರುತಿಸಿರುವುದಿಲ್ಲ. ನಾನು ಪೋಲಿಸರಿಗೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

**(ಮಾನ್ಯ ಎಪಿಪಿ ರವರ ಕೋರಿಕೆ ಮೇರೆಗೆ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ನೀಡಲಾಯಿತು)**

**ಪಾಟೀ ಸವಾಲುಃ ಮಾನ್ಯ ಎಪಿಪಿ ರವರಿಂದಃ**

ದಿ.04.12.2022 ರಂದು ರಾತ್ರಿ ಸುಮಾರು 1.15 ರ ಸಮಯದಲ್ಲಿ ನಾನು ಮತ್ತು ಚಾಸಾ.5 ರವರನ್ನು ಪ್ರಕರಣದ ವಿಚಾರವರನ್ನು ತಿಳಿಸಿ ಪೋಲಿಸರು ಕರೆದುಕೊಂಡು ಹೋಗಿರುತ್ತಗಾರೆ ಎಂದರೆ ಸರಿಯಲ್ಲ. ಚಾಸಾ.1 ರವರು ಹಾಜರುಪಡಿಸಿದ ವಾಹನವಾದ ಕೆ.ಎ.40–4383 ನಂಬರಿನ 407 ಟೆಂಪೋವ ನ್ನು ನನಗೆ ತೋರಿಸಿದ್ದು, ಅದರಲ್ಲಿ ಸಾರ್ವಜನಿಕರಿಗೆ ವಿತರಿಸುವ ಪಡಿತರ ಅಕ್ಕಿಯನ್ನು ಆರೋಪಿಗಳು ತಮ್ಮ ವಾಹನದಲ್ಲಿ ಅಕ್ರಮವಾಗಿ ಸಾಗಾಣಿಕೆ ಮಾಡುತ್ತಿರುವ ವಿಚಾರವನ್ನು ತಿಳಿಸಿರುತ್ತಾರೆ ಎಂದರೆ ಸರಿಯಲ್ಲ. ಮೇಲೆ ಹೇಳಿದ ವಾಹನವನ್ನು ರಾತ್ರಿ 1.30 ರಿಂದ 3.30 ರವರೆಗೆ ಮಹಜರ್ ಕ್ರಮದ ಮೂಲಕ ಅಮಾನತ್ತುಪಡಿಸಿಕೊಂಡರು ಎಂದರೆ ಸರಿಯಲ್ಲ. ಸದರಿ ವಾಹನದಲ್ಲಿ ಇದ್ದ 142 ಅಕ್ಕಿ ಚೀಲವನ್ನು ನನ್ನ ಸಮಕ್ಷಮ ಅಮಾನತ್ತುಪಡಿಸಿಕೊಂಡರು ಎಂದರೆ ಸರಿಯಲ್ಲ. ಆ ಸಮಯದಲ್ಲಿ ಚಾಸಾ.1 ರಿಂದ 3 ಮತ್ತು 5 ರವರ ಸಹಿಯನ್ನು ಪಡೆದರು ಎಂದರೆ ಸರಿಯಲ್ಲ. ಈ ಸಂಬಂಧ ದಿ.06.12.2022 ರಂದು ನಾನು ಹೇಳಿಕೆಯನ್ನು ಹೇಳಿರುತ್ತೇನೆ ಎಂದರೆ ಸರಿಯಲ್ಲ. ಅಲ್ಲಗಳೆದ ಹೇಳಿಕೆಯನ್ನು ನಿ.ಪಿ.6 ಎಂದು ಗುರುತಿಸಲಾಯಿತು. ಸಾಕ್ಷಿಗೆ ನಿ.ಪಿ.6 ರ ವಿಚಾರಗಳನ್ನು ಓದಿ ಹೇಳಲಾಗಿ ಅದನ್ನು ಸಂಪೂರ್ಣವಾಗಿ ನಿರಾಕರಿಸಿರುತ್ತಾರೆ. ಆರೋಪಿಗಳಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಮರು ವಿಚಾರಣೆ ಇರುವುದಿಲ್ಲ.**
**(ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಲಾಯಿತು)**

**ಓ ಹೇ ಕೇ ಸ ಇ ಒ.**

**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು**
**ಮತ್ತು ಪ್ರ.ದ.ನ್ಯಾದಂ. ಟಿ.ನರಸೀಪುರ**